## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ಹಂಚಿನಾಳ ಕ್ಯಾಂಪ್ ಜನವಸತಿಯ 712 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಮತ್ತು Augmentation ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**
1. ದಿನಾಂಕ:18.08.2021ರಂದು ನಡೆದ SLSSC ಸಭೆಯ ನಡವಳಿಗಳು
2. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ. ಇಲಾಖೆ ಇವರ ಕಡತ ಸಂ:ಗ್ರಾಕುನೀ&ನೈಇ/509/ಮುಇ/ತಾಂತ್ರಿಕ/2021-22

-----

**ಪೀಠಿಕೆ:**

ಕೇಂದ್ರ ಸರ್ಕಾರದ ಜಲ ಜೀವನ ಮಿಷನ್ (JJM) ಕಾರ್ಯಕ್ರಮದಡಿಯಲ್ಲಿ ರಾಜ್ಯದ ಎಲ್ಲಾ ಗ್ರಾಮೀಣ ಜನವಸತಿಗಳಿಗೆ 2023ರೊಳಗಾಗಿ ಕಾರ್ಯಾತ್ಮಕ ನಳ ನೀರು ಸಂಪರ್ಕವನ್ನು ಕಲ್ಪಿಸಬೇಕಾಗಿರುತ್ತದೆ.

ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ಹಂಚಿನಾಳ ಕ್ಯಾಂಪ್ ಜನವಸತಿಯ 712 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಮತ್ತು Augmentation ಕಾಮಗಾರಿಯನ್ನು ತ್ವರಿತವಾಗಿ ಅನುಷ್ಠಾನಗೊಳಿಸಲು ದಿನಾಂಕ:18.08.2021ರ SLSSC ಸಭೆಯಲ್ಲಿ ಕ್ರಿಯಾ ಯೋಜನೆಗೆ ಅನುಮೋದನೆ ದೊರಕಿರುತ್ತದೆ. ಕಾಮಗಾರಿಯ ಅಂದಾಜು ಮೊತ್ತ **ರೂ.252.00ಲಕ್ಷಗಳಿಗೆ** ಮೇಲೆ ಓದಲಾದ(2)ರಲ್ಲಿ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ರಾಯಚೂರು** ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರುರವರು ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ ಜಲ ಜೀವನ ಮಿಷನ್ (JJM) ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ: ಗ್ರಾಕುನೀ&ನೈಇ/56/ಗ್ರಾನೀಸ(4)/2022 ಬೆಂಗಳೂರು, ದಿನಾಂಕ:07.02.2022** 219

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ಹಂಚಿನಾಳ ಕ್ಯಾಂಪ್ ಜನವಸತಿಯ 712 ಮನೆಗಳಿಗೆ ಕಾರ್ಯಾತ್ಮಕ ನಳ ನೀರು ಸಂಪರ್ಕ (FHTC) ಕಲ್ಪಿಸುವ ಮತ್ತು Augmentation ಕಾಮಗಾರಿಯ ಒಟ್ಟು ಅಂದಾಜು ಮೊತ್ತ **ರೂ.252.00ಲಕ್ಷ (ಇನ್ನೂರ ಐವತ್ತೆರಡು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ ಜಲಜೀವನ ಮಿಷನ್ (JJM) ಕಾರ್ಯಕ್ರಮದಡಿ** ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ:**

1. Retrofitting ಕಾಮಗಾರಿಗಳಿಗೆ ಪ್ರತಿ ಮನೆಗೆ ಅಂದಾಜು ಮೊತ್ತ ರೂ.15000/- ಮೀರಿದ ಹಾಗೂ Augmentation ಕಾಮಗಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ Components ಗಳನ್ನು ಪರಿಗಣಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು ಟೆಂಡರ್ ಕರೆಯುವ ಪೂರ್ವದಲ್ಲಿ ಅಧೀಕ್ಷಕ ಅಭಿಯಂತರರಿಂದ ತಾಂತ್ರಿಕ ಪರಿಶೀಲನೆ ಮಾಡಿಕೊಂಡು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಸೂಚಿಸಿದೆ.

2. ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ 15ನೇ ಹಣಕಾಸಿನಡಿ ಅಂದಾಜು ಮೊತ್ತದ 15% ಹಾಗೂ ಸಮುದಾಯ ವಂತಿಕೆಯ ಅಂದಾಜು ಮೊತ್ತದ 10% ಸಂಗ್ರಹವಾಗಿರುವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
3. ಕಾಮಗಾರಿಯ ಅನುಷ್ಠಾನದಲ್ಲಿ ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳತಕ್ಕದ್ದು ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು.
4. ಸದರಿ ಅನುದಾನವನ್ನು ಕರ್ನಾಟಕ ಪಾರದರ್ಶಕ ಕಾಯ್ದೆ–1993 ಮತ್ತು ಕರ್ನಾಟಕ ಪಾರದರ್ಶಕ ನಿಯಮಗಳು–2000, ಕರ್ನಾಟಕ ಆರ್ಥಿಕ ಸಂಹಿತೆ–1958 ಹಾಗೂ ಚಾಲ್ತಿ ನಿಯಮಗಳನ್ನು ಅನುಸರಿಸತಕ್ಕದ್ದು.
5. ಕಾಮಗಾರಿಯ ಅನುಷ್ಠಾನದಲ್ಲಿ ಯಾವುದೇ ಬದಲಾವಣೆ ಮಾಡಬೇಕಾದ್ದಲ್ಲಿ ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರಿಂದ ಒಪ್ಪಿಗೆ ಪಡೆಯತಕ್ಕದ್ದು.
6. ಕಾಮಗಾರಿಗೆ ನಿಗದಿಪಡಿಸಿದ ಅನುದಾನವನ್ನು ಬೇರೆ ಕಾಮಗಾರಿಗೆ ಅಥವಾ ಯೋಜನೆಗೆ ವರ್ಗಾಯಿಸತಕ್ಕದ್ದಲ್ಲ.
7. ಕಾಮಗಾರಿಯ ಅನುಷ್ಠಾನದ ಮೂರು ಹಂತದ GPS ಛಾಯಾ ಚಿತ್ರಗಳನ್ನು ತೆಗೆದು ನಿರ್ವಹಿಸತಕ್ಕದ್ದು.
8. ಕಾಮಗಾರಿ ಪ್ರಾರಂಭಿಸುವ ಪೂರ್ವದಲ್ಲಿ ಸಂಬಂಧಪಟ್ಟ ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ ವೃತ್ತ ಕಛೇರಿಯವರಿಂದ ತಾಂತ್ರಿಕ ಮಂಜೂರಾತಿ ಪಡೆದುಕೊಳ್ಳತಕ್ಕದ್ದು.
9. ಎಲ್ಲಾ ತಾಂತ್ರಿಕ ಅಂಶಗಳನ್ನು JJM ಮಾರ್ಗಸೂಚಿಗಳನ್ವಯ ಪರಿಶೀಲಿಸಿದ ನಂತರ ತಾಂತ್ರಿಕ ಮಂಜೂರಾತಿ ನೀಡತಕ್ಕದ್ದು.
10. ತಾಂತ್ರಿಕ ಮಂಜೂರಾತಿ ನೀಡುವ ಮುನ್ನ ಕಾಮಗಾರಿಯ ಜಲಮೂಲದ ಸುಸ್ಥಿರತೆ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
11. ಕಾಮಗಾರಿಯಲ್ಲಿ ಪರಿಗಣಿಸಿರುವ ಪ್ರಾಕ್ಷೇಪಿತ ಜನಸಂಖ್ಯೆ (Decadal Growth Rate) ಬಗ್ಗೆ ಪರಿಶೀಲಿಸಿದ ನಂತರ ತಾಂತ್ರಿಕ ಮಂಜೂರಾತಿ ನೀಡಲು ಕ್ರಮವಹಿಸತಕ್ಕದ್ದು.
12. ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ ಸಂಬಂಧಪಟ್ಟ ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&ನೈ ವೃತ್ತ ಕಛೇರಿಯವರಿಂದ ದೃಢೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು IMISನಡಿ ದಾಖಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ರಾಯಚೂರು.**
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.

6. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
7. ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
8. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ರಾಯಚೂರು.**
10. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು.
12. ಸಂಪಾದಕರು, "ಕರ್ನಾಟಕ ವಿಕಾಸ" ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಬೆಂಗಳೂರು.
13. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
14. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ರಾಯಚೂರು.**
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬಹುಮಹಡಿ ಕಟ್ಟಡ, ಬೆಂಗಳೂರು.
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
17. ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬಹುಮಹಡಿ ಕಟ್ಟಡ, ಬೆಂಗಳೂರು.
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಸರ್ಕಾರದ ಪತ್ರ ಸಂ: ಗ್ರಾಕುನೀಸ ಜೆಜೆಎಂ/156/ಗ್ರಾನೀ(4)2022
ದಿನಾಂಕ: 07.02.2022ರ ಅನ್ವಯ

RURAL DRINKING WATER SUPPLY SANITATION DEPARTMENT

| Providing FHTCs to 712 Households in Hanchinal Camp Habitation of Gorebal Village, Sindhanur Taluka in Raichur District through Single Village Scheme to Hanchinal Camp village in Raichur District | | |
|---|---|---|
| **S.No.** | **Description of Works** | **Amount** |
| **I** | **PART A : IN VILLAGE DISTRIBUTION SYSTEM WITH F.H.T.C** | |
| a | Providing and laying of distribution HDPE PE-100 PN-6 Distribution line of **63 mm** dia EXISTING OHT **Total Length = 26919** | 11033248.00 |
| b | Functional Household Tap Connection (F.H.T.C) with **3 meters length** **( ~~997 Nos~~)** 967 Nos | ~~5839718.00~~ 6045598.31 |
| | 17078846.31 **Sub Total-01** | ~~16872966.00~~ |
| | 2049461.56 **Add @GST 12 %** | ~~2024756.00~~ |
| | Add for Third Party Inspection Charge- 0.70%+(18%(GST)*0.70%)=0.826% 141071.27 | ~~139371.00~~ |
| | Preparation of DPR & Survey charges 0.44% + (18%(GST)*0.44%)=0.52% 88810.00 | ~~87739.00~~ |
| | PMC Work 0.50% 85394.23 | ~~84365.00~~ |
| | 19443583.37 **(Part A)Total cost** | ~~19209197.00~~ |
| | Per FHTC Cost for Retrofitting in rs/- 19781.08 | ~~19865~~ |
| **II** | **PART B : Augmentation work** | |
| d | Repairs for Existing 100 Kl ELSR (2nos) | ~~505000.00~~ 504654.40 |
| e | Repairs for Existing 150 Kl ELSR | ~~279000.00~~ 278642.67 |
| f | Raising main From source to Elsr | **3604000.00** |
| i | Provision For Pumping Machinery ( 3Nos) | **473886.00** |
| j | Pump House | **192000.00** |
| | 5053183.07 **Sub Total** | ~~5053886.00~~ |
| | 606381.97 **Add @GST 12 %** | ~~606466.00~~ |
| | Add for Third Party Inspection Charge- 0.70%+(18%(GST)*0.70%)=0.826% 41739.29 | ~~41745.00~~ |
| | Preparation of DPR & Survey charges 0.44% + (18%(GST)*0.44%)=0.52% 26276.55 | ~~26280.00~~ |
| | PMC Work 0.50% 25265.92 | **25269.00** |
| | 5752846.80 **(Part B)Total cost** | **5753646.00** |
| | 25196430.17 **(Part A+ Part B)Total cost** | **24962843.00** |
| | Micellineous 3569.83 | **7157.00** |
| | 25200000.00 **Grand Total in Lakhs** | **24970000.00** |
| | 252.00 **Total in Lakhs** | **249.70** |
| | Per FHTC Cost for Augmentation in rs/- 5851.70 | ~~5950~~ |

**Section Officer**

**Assistant Executive Engineer**
**RDW&S Sub Division,SINDHANOOR**

**Executive Engineer**
**RDW&S Division ,RAICHUR**

"ಅನುಮೋದಿಸಿದೆ"

ಉಪ ಕಾರ್ಯದರ್ಶಿ (ಅಭಿವೃದ್ಧಿ)
ಗ್ರಾಮೀಣ ಕುಡಿಯುವ ನೀರು ಮತ್ತು
ನೈರ್ಮಲ್ಯ ಇಲಾಖೆ, ಬೆಂಗಳೂರು.

**APPROVED**

Chief Engineer
Rural Drinking Water & Sanitation Department
2nd Floor, 'E' Block, KHB Complex,
Cauvery Bhavan, K. G. Road, Bangalore-9.

**NSS ASSOCIATES**
**Hyderabad**